**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.647/2021**

ಪಿ.ಡಬ್ಲ್ಯೂಃ **10**

ಸಿ.ಡಬ್ಲ್ಯೂಃ 13

| | | |
|---|---|---|
| ಹೆಸರು | ಃ | ಬಿ ರವಿನಾಯ್ಕ |
| ತಂದೆಯ ಹೆಸರು | ಃ | ಭೀಮನಾಯ್ಕ |
| ವಯಸ್ಸು | ಃ | 50 ವರ್ಷ |
| ಉದ್ಯೋಗ | ಃ | ಹೆಚ್ ಸಿ 286 |
| ವಾಸಸ್ಥಳ | ಃ | ಬೀರೂರು |

**ದಿನಾಂಕಃ 07-05-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ ಸ.ಸ.ಅ. ರವರಿಂದ.**

ನಾನು **2018** ರಿಂದ **2023** ವರೆಗೆ ಲಕ್ಕವಳ್ಳಿ **ಪೋಲೀಸ್ ಠಾಣೆಯಲ್ಲಿ** ಮುಖ್ಯ ಪೇದೆಯಾಗಿ **ಆಗಿ ಕರ್ತವ್ಯ** ನಿರ್ವಹಿಸಿರುತ್ತೇನೆ.

ದಿನಾಂಕಃ 23-10-2018 ರಂದು ಚಾಸಾ-14 ರವರು ಠಾಣೆಯಲ್ಲಿ ನನಗೆ ಠಾಣಾ ಪ್ರಭಾರ ಅಧಿಕಾರಿಯಾಗಿ ಕರ್ತವ್ಯಕ್ಕೆ ನೇಮಕ ಮಾಡಿದ್ದು, ಸಂಜೆ 5-00 ಗಂಟೆಗೆ ಚಾಸಾ-1 ರವರು ನೀಡಿದ ಲಿಖಿತ ದೂರನ್ನು ಸ್ವೀಕರಿಸಿಕೊಂಡು ಠಾಣಾ ಮೊಕದ್ದಮೆ ಸಂಖ್ಯೆ 126/218 ಕಲಂ 454, 380 ಭಾರತೀಯ ದಂಡ ಸಂಹಿತೆ ಕಾಯ್ದೆಯಡಿಯಲ್ಲಿ ಪ್ರಕರಣವನ್ನು ದಾಖಲಿಸಿ, ಪ್ರಥಮ ವರ್ತಮಾನ ವರದಿಯನ್ನು ತಯಾರು ಮಾಡಿ ಘನ ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-14 ರವರಿಗೆ ವಹಿಸಿಕೊಟ್ಟಿರುತ್ತೇನೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಲಿಖಿತ ದೂರು ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಪ್ರಥಮ ವರ್ತಮಾನ ವರದಿಯಾಗಿದ್ದು, ಸದರಿ ದಾಖಲೆಯನ್ನು ನಿಪಿ-7 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-7(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲು ಃ ಆರೋಪಿತರ ಪರ** ಶ್ರೀ ಹೆಚ್ ಸಿ ಎಸ್ **ವಕೀಲರಿಂದ.**

ಚಾಸಾ-1 ರವರು ನೀಡಿದ ಸುಳ್ಳು ದೂರನ್ನು ಸರಿಯಾಗಿ ಪರಿಶೀಲನೆ ಮಾಡದೇ ಮೇರೆಗೆ ಆರೋಪಿಯ ವಿರುದ್ದ ಸುಳ್ಳು ಪ್ರಕರಣವನ್ನು ದಾಖಲಿಸಿ, ಸುಳ್ಳು ಪ್ರಥಮ ವರ್ತಮಾನ ವರದಿಯನ್ನು ತಯಾರು ಮಾಡಿರುತ್ತೀರಾ ಎಂದರೆ ಸರಿಯಲ್ಲ.

**ಮರುವಿಚಾರಣೆಃ** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

ಸಹಿ/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
**ಪ್ರ.ದ.ನ್ಯಾ.ದಂ. ರವರು, ತರೀಕೆರೆ.**